# ಕರ್ನಾಟಕ ಸರ್ಕಾರ ನಡವಳಿಗಳು

ವಿಷಯ: ಆಶ್ರಯ ವಸತಿ ಯೋಜನೆ - ಮಹಿಳಾ ಫಲಾನುಭವಿಗಳನ್ನು ಆಯ್ಕೆ ಮಾಡುವ ಬಗ್ಗೆ

**ಓದಲಾಗಿದೆ:**

1. ಸರ್ಕಾರಿ ಆದೇಶ ಸಂಖ್ಯೆ: ಹೆಚ್ ಯುಡಿ. 375 ಕೆಹೆಚ್‌ಬಿ 93, ದಿನಾಂಕ 31.12.93
2. ಸರ್ಕಾರಿ ಆದೇಶ ಸಂಖ್ಯೆ: ಹೆಚ್ ಯುಡಿ. 1 ಹೆಚ್‌ಎಹೆಚ್ 95 (ಭಾಗ ಖ1,2) ದಿನಾಂಕ 18.08.95

**ಪ್ರಸ್ತಾವನೆ :**

ಮೇಲಿನ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ 31.12.93 ರ ಆದೋಶದಲ್ಲಿ ಸರ್ಕಾರವು ಮಹಿಳಾ ಅಭಿವೃದ್ಧಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ದಿಶೆಯಲ್ಲಿ ಆಶ್ರಯ ವಸತಿ ಯೋಜನೆಯಡಿ ಫಲಾನುಭವಿಗಳನ್ನು ಆರಿಸಿ ಫಲವನ್ನು ವಿತರಿಸುವ ಸಮಯದಲ್ಲಿ ಪತಿ ಪತ್ನಿಯವರ ಜಂಟಿ ಖಾತೆಯಲ್ಲಿ ನೀಡುವಂತೆ ಆದೇಶಿಸಲಾಗಿದೆ. ಹಾಗೂ ಕ್ರಮ ಸಂಖ್ಯೆ: (2) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಆಶ್ರಯ ವಸತಿ ಯೋಜನೆಯಡಿ ಫಲಾನುಭವಿಗಳನ್ನು ಗುರುತಿಸಿ ವಿತರಿಸುವಾಗ ಮನೆ ಮತ್ತು ನಿವೇಶನಗಳನ್ನು ವಿತರಿಸುವಾಗ ಕುಟುಂಬದ ವಾರ್ಷಿಕ ವರಮಾನ ರೂ. 11800 ಗಳಿಗಿಂತ ಹೆಚ್ಚಿರಬಾರದೆಂದು ಮತ್ತು ವಸತಿ ರಹಿತರಾಗಿರಬೇಕೆಂದು ತಿಳಿಸಲಾಗಿದೆ.

ಸರ್ಕಾರವು ಮಹಿಳಾ ಅಭಿವೃದ್ಧಿ ಕಾರ್ಯಕ್ರಮವನ್ನು ತೀವ್ರವಾಗಿ ಅನುಷ್ಠಾನಗೊಳಿಸುವ ದಿಶೆಯಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಈ ಕಾರ್ಯಕ್ರಮದಡಿ ಸರ್ಕಾರದ ವಿವಿಧ ವಸತಿ ಯೋಜನೆಯಡಿ ವಿತರಿಸುವ ಮನೆಗಳನ್ನು ಮಹಿಳೆಯರ ಹೆಸರಿನಲ್ಲಿ ಮಾತ್ರ ವಿತರಿಸುವಂತೆ ತೀರ್ಮಾನಿಸಿ ಅದರಂತೆ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ ವ ಇ 56 ಹೆಚ್‌ಎಎಸ್ 2000, ದಿನಾಂಕ 03.08.2000**

ಮೇಲ್ಕಂಡ ಸಂದರ್ಭದಲ್ಲಿ ಆಶ್ರಯ ಸಮಿತಿಗಳು ಫಲಾನುಭವಿಗಳನ್ನು ಆಯ್ಕೆ ಮಾಡಿ ಹಕ್ಕು ಪತ್ರಗಳನ್ನು ವಿತರಿಸುವಾಗ ಅವರ ಪತ್ನಿಯ ಹೆಸರಿನಲ್ಲಿ ವಿತರಿಸತಕ್ಕದ್ದು. ಆದಾಗ್ಯೂ ಅವಿವಾಹಿತರ ಪುರುಷರು ಮತ್ತು ವಿಧುರರನ್ನು ಆಯ್ಕೆ ಮಾಡಿದ್ದಲ್ಲಿ ಅವರ ಹೆಸರಿನಲ್ಲಿ ಹಕ್ಕು ಪತ್ರ ವಿತರಿಸುವುದು.

ಈ ಬಗ್ಗೆ, ಈ ಹಿಂದೆ ಹೊರಡಿಸಲಾದ ಸರ್ಕಾರಿ ಆದೇಶ ಸಂಖ್ಯೆ: ವ ಇ 735 ಕೆಹೆಚ್‌ಬಿ 93 ದಿನಾಂಕ 31.12.93 ರ ಆದೇಶದಲ್ಲಿ ಆಶ್ರಯ ಯೋಜನೆಯಡಿ ವಿತರಿಸುವ ಮನೆಗಳನ್ನು ಪತಿ / ಪತ್ನಿಯವರ ಹೆಸರಿನಲ್ಲಿ ಜಂಟಿ ಖಾತೆಯಲ್ಲಿ ಹಕ್ಕು ಪತ್ರ ನೀಡುವಂತೆ ಹೊರಡಿಸಿದ ಆದೇಶವನ್ನು ರದ್ದುಪಡಿಸಲಾಗಿದೆ.

ಜಿಲ್ಲಾಧಿಕಾರಿಗಳು, ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಮತ್ತು ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ (ನಿ) ಗಳು ಈ ಯೋಜನೆಯನ್ನು ಜಾರಿಗೊಳಿಸುವ ಪ್ರಾಧಿಕಾರಿಗಳಾಗಿವೆ ಮತ್ತು ಈ ಯೋಜನೆಯ ಕಾರ್ಯ ಪ್ರಗತಿಯ ಬಗ್ಗೆ ಪ್ರತಿ ತಿಂಗಳು 5 ನೇ ತಾರೀಖಿನೊಳಗೆ ಪ್ರಗತಿ ವರದಿಯನ್ನು ಸರ್ಕಾರಕ್ಕೆ ತಪ್ಪದೇ ಕಳುಹಿಸತಕ್ಕದ್ದು.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು**
**ಅವರ ಹೆಸರಿನಲ್ಲಿ**

**(ಬಿ.ಎಸ್. ಜಾಪಾಲಿ)**
**ಸರ್ಕಾರದ ಅಧೀನ ಕಾರ್ಯದರ್ಶಿ**
**ವಸತಿ ಇಲಾಖೆ**